# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 666 /2021-22, ದಿನಾಂಕ : 21-02-2022

ದಿನಾಂಕ: 19-02-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀಮತಿ. ಶಿಲ್ಪ.ಎನ್ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | ಶ್ರೀ.ನರಸಿಂಹ | ಕಿ.ಆ.ಪ | |

ದಿನಾಂಕ 19-02-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್

ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀಮತಿ. ಅಂಬಿಕಾ ಕೃಷ್ಣರವರು ಮಾತನಾಡಿ ರಾಮಯ್ಯಂಗಾರ್ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಕುಡಿಯುವ ನೀರಿನ ಪೈಪ್ ಒಡೆದು ಹೋಗಿ ನೀರು ಪೋಲಾಗುತ್ತಿರುವ ಬಗ್ಗೆ ಮತ್ತು ಎಸ್.ಬಿ.ಕ್ರಾಸ್ ರಸ್ತೆಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿರುವುದು ಹಾಗೂ ಸಜ್ಜನ್‌ರಾವ್ ವೃತ್ತದ ಐಲ್ಯಾಂಡ್‌ನಲ್ಲಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕದಂತೆ ಮಾರ್ಷಲ್‌ಗಳನ್ನು ನೇಮಿಸುವಂತೆ ಸಭೆಯ ಗಮನಕ್ಕೆ ತಂದರು. ಸದರಿ ವಿಷಯಗಳಿಗೆ ಸಂಬಂಧಿಸಿದಂತೆ ಮಾನ್ಯ ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿಯ ನವೀನ್ ಎಂಬುವವರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ನೀರು ಪೋಲಾಗುತ್ತಿರುವುದನ್ನು ತಡೆಗಟ್ಟುವ ಸಂಬಂಧ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು. ಬೀದಿ ನಾಯಿಗಳ ಹಾವಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ವಹಿಸಲು ಪಶುಸಂಗೋಪಾನಾ ಇಲಾಖೆಯ ಅಧಿಕಾರಿಗಳನ್ನು ಕೋರುವುದಾಗಿ ತಿಳಿಸಿದರು. ಮತ್ತು ಪರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕದಂತೆ ನೋಡಿಕೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ.ಜಯಪ್ರಕಾಶ್ ಎಂಬ ಮಾರ್ಷಲ್‌ರವರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ವೆಂಕಟೇಶ್ ರವರು ಮಾತನಾಡಿ ಈ ವಿಷಯಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಿದರು. ಡಯಾನಗಲ್ ರಸ್ತೆಯ ಪಾದಚಾರಿ ಮಾರ್ಗವನ್ನು ಸರಿಪಡಿಸುವುದು, ಎಂ.ಎಂ.ವಿ.ರಸ್ತೆಯಲ್ಲಿ ಸಿ.ಸಿ.ಟಿವಿ ಕ್ಯಾಮರಾಗಳನ್ನು ಅಳವಡಿಸುವುದು, ನ್ಯಾಷನಲ್ ಹೈ ಸ್ಕೂಲ್ ರಸ್ತೆ ಹಾಗೂ ಎಂ.ಎಂ.ವಿ. ರಸ್ತೆಗಳು ಅಳವಡಿಸುವುದು, ನ್ಯಾಷನಲ್ ಹೈ ಸ್ಕೂಲ್ ರಸ್ತೆ ಹಾಗೂ ಎಂ.ಎಂ.ವಿ. ರಸ್ತೆಗಳನ್ನು ಸೇರುವ ಸ್ಥಳದಲ್ಲಿ ರಸ್ತೆ ಉಬ್ಬನ್ನು ಅಳವಡಿಸುವುದು, ಜೈನ್ ಕಾಲೋಜ್‌ನ ಹಿಂಭಾಗದ ಕನ್ಸರ್‌ವೆನ್ಸಿಯನ್ನು ಸ್ವಚ್ಛ ಮಾಡುವಂತೆ ಸಭೆಯಲ್ಲಿ ಕೋರಿದರು.

ಈ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ TEC ವಿಭಾಗದ ಅಧಿಕಾರಿಗಳು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಅಧಿಕಾರಿಗಳು, ಪೋಲಿಸ್ ಇಲಾಖೆಯ ಅಧಿಕಾರಿಗಳ ಸಂಪರ್ಕಿಸಿ ಸೂಕ್ತ ಕ್ರಮ ವಹಿಸಲು ಕೋರಬೇಕೆಂದು ಮಾನ್ಯ ನೋಡಲ್ ಅಧಿಕಾರಿಗಳ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ.ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಕೋರಿದರು. 1). ಆರ್.ವಿ.ರಸ್ತೆಯಲ್ಲಿ ಬಸ್ ಶೆಲ್ಟರ್‌ಅನ್ನು ನಿರ್ಮಿಸುವುದು. 2). ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೋಲ್ಯಾರ್ಡ್ಸ್‌ಗಳನ್ನು ನಿರ್ಮಿಸುವುದು. 3). ಸರ್ವೇಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ಮಾಂಸ ಡಾರಿ ಹೋಟೆಲ್ ಮತ್ತು ಅದೇ ರಸ್ತೆಯಲ್ಲಿರುವ ಹಾರ್ಡ್‌ವೇರ್ ಶಾಪ್ ತೆರವುಗೊಳಿಸುವುದು 4). ಕೆ.ಆರ್. ರಸ್ತೆಯಲ್ಲಿರುವ ನರ್ಸರಿಯನ್ನು ಸಂಪೂರ್ಣವಾಗಿ ತೆರವುಗೊಳಿಸುವುದು. 5). ಶ್ರೀರಾಮ ಮಂದಿರ ರಸ್ತೆ ಕನ್ಸ್‌ರ್‌ವೆನ್ಸಿಯಲ್ಲಿರುವ ಹಸುಗಳನ್ನು ಮತ್ತು ಶೆಡ್ ಅನ್ನು ತೆಗೆಯುವುದು. 6). ವಾಣಿ ವಿಲಾಸ ರಸ್ತೆ ಮೇಲು ಸೇತುವೆ ಕೆಳಗೆ ವಾಸಿಸುತ್ತಿರುವವರನ್ನು ತೆರವುಗೊಳಿಸುವುದು  ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಮಗ್ರವಾಗಿ ಚರ್ಚೆ ಮಾಡಿದ್ದು, ಸಂಬಂಧಪಟ್ಟ ಇಲಾಖೆಗಳಾದ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ಮ ಆರೋಗ್ಯವೈದ್ಯಾಧಿಕಾರಿಗಳು, ಪಶುಸಂಗೋಪನಾ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳ ಸಮನ್ವಯತೆ ಮಾಡಿಕೊಂಡು ಸೂಕ್ತ ಕ್ರಮ ವಹಿಸುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಅಪದ್ ಮಿತ್ರ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸ್ವಯಂ ಸೇವಕರನ್ನು ಆಯ್ಕೆ ಮಾಡುವಂತೆ ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಸದಸ್ಯರನ್ನು ಕೋರಿದರು ಆಗ  ಸದಸ್ಯರೆಲ್ಲರೂ ಸೂಕ್ತ ಸಹಕಾರ ನೀಡುವುದಾಗಿ ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)